ಆ) ಈ ಕ್ರೀಡೆ ಉತ್ತೇಜಿಸಲು 2007–08ನೇ ಸಾಲಿನಿಂದ 2010–11ನೇ ಸಾಲಿನವರೆಗೆ ತಗಲಿದ ವೆಚ್ಚದ ವಿವರ ಈ ಕೆಳಕಂಡಂತಿದೆ:–

1. 2007–08 - 1,44,000
2. 2008–09 - 1,44,000
3. 2009–10 – 1,44,000
4. 2010–11 – 1,78,000

50 ವರ್ಷ ವಯೋಮಿತಿ ಮೀರಿದ ಕುಸ್ತಿ / ಕ್ರೀಡಾಪಟುಗಳಿಗೆ ಇಲಾಖೆಯ ಲೆಕ್ಕಶೀರ್ಷಿಕೆ 2204–00–800–0–12 ಕಷ್ಟ ಪರಿಸ್ಥಿತಿಯಲ್ಲಿರುವ ಕುಸ್ತಿ / ಕ್ರೀಡಾಪಟುಗಳಿಗೆ ಆರ್ಥಿಕ ನೆರವಿನ ಅಡಿಯಲ್ಲಿ ಮಾಸಾಶನ ನೀಡಲಾಗುತ್ತಿದೆ. ಮಾಸಾಶನ ಹೊರತುಪಡಿಸಿ, ಬೇರ್ಯಾವುದೇ ಸೌಲಭ್ಯಗಳನ್ನು ಇಲಾಖೆಯ ವತಿಯಿಂದ ನೀಡಲು ಅವಕಾಶವಿರುವುದಿಲ್ಲ.

ಇ) ಯಾವುದು ಇರುವುದಿಲ್ಲ.

ಕುಡಿಯುವ ನೀರು ಒದಗಿಸುವುದು

49 (184) ಶ್ರೀ ನರೇಂದ್ರ ಸ್ವಾಮಿ ಪಿ.ಎಂ(ಮಳವಳ್ಳಿ):– ಮಾನ್ಯ ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಚನ್ನಪಟ್ಟಣ ಮತ್ತು ರಾಮನಗರ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆಗೆ ಮಳವಳ್ಳಿ ತಾಲ್ಲೂಕಿನ ಹಲಗೂರು ಮುಖಾಂತರ ಕೊಳವೆ ಮಾರ್ಗ ಕಾಮಗಾರಿ ಪ್ರಗತಿಯಲ್ಲಿದ್ದು, ಮಾರ್ಗ ಮಧ್ಯದ ಹಳ್ಳಿಗಳಿಗೆ ನೀರೊದಗಿಸುವ ಯೋಜನೆ ಕಾರ್ಯಗತವಾಗದಿರಲು ಕಾರಣವೇನು;

ಆ) ಇದರ ಬಗ್ಗೆ ಇಲಾಖೆ ತೆಗೆದುಕೊಂಡ ಕ್ರಮಗಳೇನು?

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು):

ಅ,ಆ) ಚನ್ನಪಟ್ಟಣ ಮತ್ತು ರಾಮನಗರ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆಗೆ ಮಳವಳ್ಳಿ ತಾಲ್ಲೂಕಿನ ಹಲಗೂರು ಮುಖಾಂತರ ಕೊಳವೆ ಮಾರ್ಗದ ಯಾವುದೇ ಕಾಮಗಾರಿ ಪ್ರಸ್ತುತ ಪ್ರಗತಿಯಲ್ಲಿರುವುದಿಲ್ಲ. ರಾಮನಗರ ಮತ್ತು ಚನ್ನಪಟ್ಟಣ ನಗರಗಳಿಗೆ ಹಾಗೂ ಮಾರ್ಗ ಮಧ್ಯದ 15 ಹಳ್ಳಿಗಳಿಗೆ ಬೆಂಗಳೂರು ಜಲಮಂಡಳಿ ಶುದ್ಧೀಕರಣ ಘಟಕಗಳಿಂದ ಬರುವ ನೀರು (Back waters) ಮತ್ತು ಶಿಂಷಾ ನದಿ ಮೂಲದಿಂದ, ಸಂಯುಕ್ತ ನೀರು

ಸರಬರಾಜು ಯೋಜನೆಯನ್ನು ಎ.ಡಿ.ಬಿ. ಆರ್ಥಿಕ ನೆರವಿನಿಂದ 2002ನೇ ಸಾಲಿನಲ್ಲಿ ಪೂರ್ಣಗೊಳಿಸಿ ಚಾಲನೆಗೊಳಿಸಲಾಗಿದೆ. ಈ ಯೋಜನೆಯಡಿ ಮಾರ್ಗ ಮಧ್ಯದ ಕೆಲವು ಗ್ರಾಮಗಳಿಗೆ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತದೆ.

ಮಾರ್ಗ ಮಧ್ಯದ ಹಳ್ಳಿಗೆ ಕುಡಿಯುವ ನೀರು ಒದಗಿಸುವುದರ ಬಗ್ಗೆ

50 (185) ಶ್ರೀ ಪಿ.ಎಂ. ನರೇಂದ್ರ ಸ್ವಾಮಿ (ಮಳವಳ್ಳಿ):– ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ, ಮಾನವಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಹಾಗೂ ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಬೆಂಗಳೂರು ನಗರಕ್ಕೆ ಹಲವಾರು ಹಂತಗಳ ಕುಡಿಯುವ ನೀರಿನ ಯೋಜನೆಗಳಿಗೆ ಮಳವಳ್ಳಿ ತಾಲ್ಲೂಕಿನ ತೊರೆಕಾಡನಹಳ್ಳಿ ಮುಖಾಂತರ ಕಾವೇರಿ ನೀರು ಸರಬರಾಜಾಗುತ್ತಿದ್ದು, ಮಾರ್ಗ ಮಧ್ಯದ ಹಳ್ಳಿಗಳಿಗೆ ಕುಡಿಯುವ ನೀರಿನ ಯೋಜನೆ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿಲ್ಲದಿದ್ದಲ್ಲಿ ಇದನ್ನು ಕಾರ್ಯಗತಗೊಳಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮವೇನು?

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ, ಮಾನವಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಹಾಗೂ ಬೆಂಗಳೂರು ಜಲಮಂಡಳಿ ಸಚಿವರು):

ಅ) ಬೆಂಗಳೂರು ನಗರಕ್ಕೆ ಹಲವಾರು ಹಂತಗಳ ಕುಡಿಯುವ ನೀರಿನ ಯೋಜನೆಗಳಿಗೆ ಮಳವಳ್ಳಿ ತಾಲ್ಲೂಕಿನ ತೊರೆಕಾಡನಹಳ್ಳೀ ಮುಖಾಂತರ ಕಾವೇರಿ ನೀರು ಸರಬರಾಜಾಗುತ್ತಿದ್ದು, ಮಾರ್ಗಮಧ್ಯದ ಯಾವುದೇ ಹಳ್ಳಿಗಳಿಗೆ ಕುಡಿಯುವ ನೀರನ್ನು ನೀಡುವ ಪ್ರಸ್ತಾವನೆ ಇರುವುದಿಲ್ಲ.

ಪ್ರಸ್ತುತ ಕನಕಪುರ ಪಟ್ಟಣಕ್ಕೆ ದಿನಂಪ್ರತಿ 3.5 ದಶಲಕ್ಷ ಲೀಟರ್ ಸರಾಸರಿ ನೀರನ್ನು ಸರಬರಾಜು ಮಾಡಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.